ದಿಃ 17-02-2025 ರಂದು ಸಾಕ್ಷಿ ಪ್ರಮಾಣ ವಚನ ಬೋಧಿಸಿ ವಿಚಾರಣೆಗೆ ಒಳಪಡಿಸಲಾಯಿತು.

ನಾನು ಈ ಹಿಂದೆ ಸಲ್ಲಿಸಿದ ಪ್ರಮಾಣೀಕೃತ ಹೇಳಿಕೆಯನ್ನು ನನ್ನ ಮುಖ್ಯ ವಿಚಾರಣೆಯಾಗಿ ಪರಿಗಣಿಸಬೇಕಾಗಿ ಪ್ರಾರ್ಥಿಸುತ್ತೇನೆ .

**ಮುಂದುವರೆದ ಮುಖ್ಯ ವಿಚಾರಣೆ ಃ ಪಿರ್ಯಾದಿದಾರರ ಪರ ಶ್ರೀ. ಎಂ.ಎನ್.ಜೆ . ವಕೀಲರಿಂದ**

ಈ ಕೆಳಕಂಡ ದಾಖಲಾತಿಗಳನ್ನು ಹಾಜರುಪಡಿಸಿದ್ದೇನೆ . ಆರೋಪಿತನು ನಮಗೆ ನೀಡಿದ ಚೆಕನ್ನು, ಬ್ಯಾಂಕಿನ ಹಿಂಬರಹವನ್ನು ಮತ್ತು ಆರೋಪಿತನಿಗೆ ನೀಡಿದ ನೋಟಿಸ್, ಅಂಚೆ ರಶೀದಿ ಮತ್ತು ಅಂಚೆ ಸ್ವೀಕೃತಿಯನ್ನು ಹಾಜರು ಪಡಿಸಿರುತ್ತೇನೆ. ಸದರಿ ದಾಖಲೆಗಳಲ್ಲಿ ಚೆಕನ್ನು ನಿಪಿ - 1 ಎಂದು, ಆರೋಪಿಯ ಸಹಿಯನ್ನು ನಿಪಿ-1(ಎ) ಎಂದು, ಬ್ಯಾಂಕಿನ ಹಿಂಬರಹವನ್ನು ನಿಪಿ-2 ಎಂದು ಆರೋಪಿಗೆ ನೀಡಿದ ನೋಟಿಸಿನ ಕಚೇರಿ ಪ್ರತಿಯನ್ನು ನಿಪಿ-3 ಎಂದು , ಅಂಚೆ ರಶೀದಿ ಮತ್ತು ಸ್ವೀಕೃತಿಯನ್ನು ನಿಪಿ - 4 ಮತ್ತು 5 ಗುರುತಿಸಲಾಯಿತು. ಪ್ರಸ್ತುತ ಪ್ರಕರಣ ನಡೆಸಲು ನೀಡಿದ ಅಧಿಕಾರ ಪತ್ರವನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-6 ಎಂದು ಗುರುತಿಸಲಾಯಿತು.

**ಆದ್ದರಿಂದ ಆರೋಪಿತನ ವಿರುದ್ಧ ಕಲಂ ೧೩೮ ಎನ್.ಐ ಆ್ಯಕ್ಟ ಅಡಿಯಲ್ಲಿ ಸೂಕ್ತ ಕ್ರಮ ಜರುಗಿಸಿ ಶಿಕ್ಷಿಸಬೇಕಾಗಿ ಪ್ರಾರ್ಥಿಸುತ್ತೇನೆ.**

**ಪಾಟೀ ಸವಾಲು ಃ ಆರೋಪಿ ಪರ ಶ್ರೀ. ಎಸ್ .ಐ.ಜೆ . ವಕೀಲರಿಂದಃ**

ಆರೋಪಿ ಪರ ವಕೀಲರು ಎನ್.ಐ.ಆ್ಯಕ್ಟ ಕಲಂ 145 ರಡಿ ಪಾಟೀ ಸವಾಲು ಮಾಡಲು ಅನುಮತಿ ಕೋರಿ ಅರ್ಜಿ ಸಲ್ಲಿಸದೇ ಇದ್ದ ಕಾರಣ ಪಾಟೀ ಸವಾಲು ಏನು ಇಲ್ಲ ಎಂದು ತೆಗೆದುಕೊಳ್ಳಲಾಯಿತು .

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದ ಮೇಲೆ ಗಣಕೀಕರಿಸಿದೆ).

ಓ.ಹೇ.ಕೇ. ಸರಿ ಅದೆ.

ಸಹಿ ಇದೆ.

ಹಿರಿಯ ಸಿವಿಲ್ ನ್ಯಾಯಧೀಶರು ಹಾಗೂ

ಪ್ರ.ದ.ನ್ಯಾದಂ. ಹಳಿಯಾಳ.